I/630959/2024

ಕರ್ನಾಟಕ ಸರ್ಕಾರ
**ತಾಂತ್ರಿಕ ಶಿಕ್ಷಣ ಇಲಾಖೆ**

| | |
|---|---|
| DTE-ADMI0EST(10)/1/2024 /513 | ಆಯುಕ್ತರ ಕಛೇರಿ,<br>ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,<br>ಅರಮನೆ ರಸ್ತೆ, ಬೆಂಗಳೂರು-560 001.<br>ದಿನಾಂಕ: 27.06.2024 |

# ಹಿಂಬರಹ

ಸರ್ಕಾರದ ಆದೇಶ ಸಂಖ್ಯೆ: ಇಡಿ 23 ಡಿಟಿಇ 2024 ಬೆಂಗಳೂರು, ದಿನಾಂಕ :16.03.2024ನ್ನು ಸಂಬಂಧಪಟ್ಟ ಪ್ರಾಂಶುಪಾಲರು ಮತ್ತು ಉಪನ್ಯಾಸಕರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ರವಾನಿಸಲಾಗಿದೆ.

Signed by
Prasanna H
Date: 01-07-2024 18:01:16
ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ.

ಇವರಿಗೆ:-
1. ಸಂಬಂಧಪಟ್ಟ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ - ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.
2. ಸಂಬಂಧಪಟ್ಟ ಸರ್ಕಾರಿ ಪಾಲಿಟೆಕ್ನಿಕ್‌ಗಳ ಉಪನ್ಯಾಸಕರುಗಳಿಗೆ (ಪ್ರಾಂಶುಪಾಲರ ಮುಖಾಂತರ)

ಪ್ರತಿ:-
1. ಮಹಾಲೇಖಪಾಲರು, ಎ&ಇ, ಬೆಂಗಳೂರು.
2. ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ(ತಾಂತ್ರಿಕ), ಬಹುಮಹಡಿ ಕಟ್ಟಡ, ಬೆಂಗಳೂರು.
3. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
4. ಆಪ್ತ ಶಾಖೆ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. , ಇ-ಆಡಳಿತ, ವಿಭಾಗಕ್ಕೆ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು
6. ಹೆಚ್ಚುವರಿ ಪ್ರತಿ ಕಡತಕ್ಕೆ

# ಕರ್ನಾಟಕ ಸರ್ಕಾರದ ನಡಾವಳಿಗಳು

**ವಿಷಯ:** ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರುಗಳಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ವೃತ್ತಿ ಪದೋನ್ನತಿ ಮತ್ತು ಎ.ಜಿ.ಪಿ. ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ:ಇಡಿ 118 ಡಿಟಿಇ 2010, ದಿನಾಂಕ: 31.03.2011.
2. ಸರ್ಕಾರದ ಆದೇಶ ಸಂಖ್ಯೆ:ಇಡಿ 167 ಡಿಟಿಇ 2017, ದಿನಾಂಕ: 10.11.2020.
3. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರ ಏಕ ಕಡತ ಸಂಖ್ಯೆ:DTE-ADMI0EST(10)/1/2024 (**E- 1287064**)

DIRECTOR / EST-10
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಆಪ್ತ ಶಾಖೆ.
ಸಂಖ್ಯೆ 1746
ದಿನಾಂಕ 18 MAR 2024

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ 6ನೇ ಎಐಸಿಟಿಇ ವೇತನ ಶ್ರೇಣಿಗಳನ್ನು ದಿನಾಂಕ:01.04.2011 ರಿಂದ ಅನ್ವಯಿಸುವಂತೆ ವಿಸ್ತರಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ ಸರ್ಕಾರಿ/ಖಾಸಗಿ ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿನ ಬೋಧಕ ಸಿಬ್ಬಂದಿಗಳಿಗೆ ಸಿ.ಎ.ಎಸ್ ಯೋಜನೆ ಆಧಾರಿತ ವೃತ್ತಿ ಪದೋನ್ನತಿ (CAS) ಸೌಲಭ್ಯಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಮಾರ್ಗಸೂಚಿಯನ್ನು ಹೊರಡಿಸಲಾಗಿದೆ. All India Council for Technical Education (Career Advancement scheme for the teachers and other Academic staff in Technical Institutions) (Diploma) Regulations, 2012ರ ದಿನಾಂಕ:08.11.2012ರಲ್ಲಿನ ನಿಯಮಗಳಲ್ಲಿ ವಿಧಿಸಿರುವ ಎ.ಪಿ.ಐ ಆಧಾರಿತ ಅಂಕಗಳ ಪರಿಗಣನೆಯಿಂದ ದಿನಾಂಕ:07.11.2015ರವರೆಗೆ ವಿನಾಯಿತಿ ನೀಡಿ ಕೆಲವು ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ವೃತ್ತಿ ಪದೋನ್ನತಿ (CAS) ಸೌಲಭ್ಯವನ್ನು ಮಂಜೂರು ಮಾಡಲು ಆದೇಶಿಸಲಾಗಿದೆ.

ಮೇಲೆ ಓದಲಾದ (3)ರ ಏಕ ಕಡತದ ಪ್ರಸ್ತಾವನೆಯಲ್ಲಿ, ಸರ್ಕಾರದ ಪತ್ರ ಸಂಖ್ಯೆ:ಇಡಿ 60 ಡಿಟಿಇ 2020 ದಿನಾಂಕ:26.04.2022ರಲ್ಲಿ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ಸ್ಥಾನೀಕರಣ ಮುಂಬಡ್ತಿ ಮತ್ತು ಎ.ಜಿ.ಪಿ. ಮಂಜೂರು ಮಾಡುವ ಪ್ರಸ್ತಾವನೆಗಳನ್ನು ಪರಿಶೀಲಿಸಲು ಪ್ರತ್ಯೇಕ ಸ್ಥಾನೀಕರಣ ಸಮಿತಿಯನ್ನು ರಚಿಸುವ ಅಧಿಕಾರವನ್ನು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರಿಗೆ ಪ್ರತ್ಯಾಯೋಜಿಸಲಾಗಿದೆ. ಅದರನ್ವಯ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ರವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ವಿಷಯ ತಜ್ಞರುಗಳನ್ನೊಳಗೊಂಡ ಸ್ಥಾನೀಕರಣ ಸಮಿತಿಯು ದಿನಾಂಕ:16.01.2023 ರಿಂದ 25.01.2023ರವರೆಗೆ ಸಭೆ ಸೇರಿ ಸರ್ಕಾರಿ ಪಾಲಿಟೆಕ್ನಿಕ್‌ಗಳ 1)ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗದ 09 ಉಪನ್ಯಾಸಕರುಗಳು, 2) ಕಂಪ್ಯೂಟರ್ ಸೈನ್ಸ್ ವಿಭಾಗದ 05 ಉಪನ್ಯಾಸಕರುಗಳು 2)ಇ&ಸಿ ವಿಭಾಗದ 03 ಉಪನ್ಯಾಸಕರುಗಳು, 4) ಕಮರ್ಷಿಯಲ್ ಪ್ರಾಕ್ಟೀಸ್ ವಿಭಾಗದ 04 ಉಪನ್ಯಾಸಕರುಗಳು, 5)ವಿಜ್ಞಾನ ವಿಭಾಗದ 01 ಮತ್ತು 6)ಲೈಬ್ರರಿ ಸೈನ್ಸ್ ವಿಭಾಗದ 01 ಉಪನ್ಯಾಸಕರುಗಳನ್ನೊಳಗೊಂಡಂತೆ ಒಟ್ಟು 23 ಉಪನ್ಯಾಸಕರುಗಳು ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ಸ್ಥಾನೀಕರಣ ಮುಂಬಡ್ತಿ ಮತ್ತು ಎ.ಜಿ.ಪಿ. ಸೌಲಭ್ಯಕ್ಕೆ

ನಿಯಮಾನುಸಾರ ಅರ್ಹತೆ ಹೊಂದಿರುವ ಬಗ್ಗೆ ಪರಿಶೀಲಿಸಿ, ಸದರಿಯವರಿಗೆ ವೃತ್ತಿ ಪದೋನ್ನತಿಯನ್ನು ಮಂಜೂರು ಮಾಡಲು ಶಿಫಾರಸ್ಸು ಮಾಡಿರುತ್ತದೆ. ಅದರಂತೆ, ಒಟ್ಟು 23 ಉಪನ್ಯಾಸಕರುಗಳಿಗೆ 6ನೇ ಎಐಸಿಟಿಇ ವೇತನ ಶ್ರೇಣಿ ರೂ.15600-39100+ಎಜಿಪಿ ರೂ.5400 ರಿಂದ ವೇತನ ಶ್ರೇಣಿ ರೂ.15600-39100 + ಎಜಿಪಿ ರೂ.6,000ಕ್ಕೆ ಸದರಿಯವರುಗಳು ಮುಂಬಡ್ತಿಗೆ ಅರ್ಹತೆ ಪಡೆದ ದಿನಾಂಕದಿಂದ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ಸ್ಥಾನೀಕರಣ ಮುಂಬಡ್ತಿ ಮತ್ತು ಎ.ಜಿ.ಪಿ. ಸೌಲಭ್ಯವನ್ನು ಮಂಜೂರು ಮಾಡುವಂತೆ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆರವರು ಕೋರಿರುತ್ತಾರೆ.

ಮೇಲೆ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 23 ಉಪನ್ಯಾಸಕರುಗಳ ಪೈಕಿ ಅರ್ಹರಿರುವ 22 ಜನ ಉಪನ್ಯಾಸಕರುಗಳಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆ(CAS)ಯಡಿ 6ನೇ ಎಐಸಿಟಿಇ ವೇತನ ಶ್ರೇಣಿ ರೂ.15600-39100+ಎಜಿಪಿ ರೂ.5400 ರಿಂದ ವೇತನ ಶ್ರೇಣಿ ರೂ.15600-39100 + ಎಜಿಪಿ ರೂ.6000ಕ್ಕೆ ವೃತ್ತಿ ಪದೋನ್ನತಿ ನೀಡಲು ಸರ್ಕಾರವು ತೀರ್ಮಾನಿಸಿದ್ದು, ಆದರಂತೆ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಇಡಿ 23 ಡಿಟಿಇ 2024</u>**

**<u>ಬೆಂಗಳೂರು, ದಿನಾಂಕ: 16ನೇ ಮಾರ್ಚ್ 2024</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಆದೇಶದ **<u>ಅನುಬಂಧ</u>**ದಲ್ಲಿರುವ 22 ಉಪನ್ಯಾಸಕರುಗಳಿಗೆ ಕೆಳಕಂಡ ಷರತ್ತಿಗೊಳಪಟ್ಟು ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆ(CAS)ಯಡಿ 6ನೇ ಎಐಸಿಟಿಇ ವೇತನ ಶ್ರೇಣಿ ರೂ.15600-39100+ಎಜಿಪಿ ರೂ.5400ರಿಂದ ವೇತನ ಶ್ರೇಣಿ ರೂ.15600-39100 + ಎಜಿಪಿ ರೂ.6000ಕ್ಕೆ ವೃತ್ತಿ ಪದೋನ್ನತಿ ನೀಡಿ ಆದೇಶಿಸಿದೆ.

**<u>ಷರತ್ತುಗಳು</u>**:

i. 2010 ಮತ್ತು 2012ರ ಎಐಸಿಟಿಇ ರೆಗ್ಯುಲೇಷನ್‌ಗಳನ್ವಯ ಎ.ಜಿ.ಪಿ ಮಂಜೂರಾತಿಯು ಸರ್ಕಾರದ ಮಾರ್ಗಸೂಚಿ/ ಆದೇಶಗಳಲ್ಲಿನ ನಿಬಂಧನೆಗೊಳಪಟ್ಟಿರುತ್ತದೆ.

ii. ಎ.ಜಿ.ಪಿ ಮಂಜೂರಾತಿಯು ಎಐಸಿಟಿಇ/ಯುಜಿಸಿ/ಸರ್ಕಾರ/ಇಲಾಖೆ ಕಾಲಕಾಲಕ್ಕೆ ಹೊರಡಿಸಿರುವ ಆದೇಶ/ ಸುತ್ತೋಲೆ/ ಪತ್ರಗಳಲ್ಲಿ ನಿಗದಿಪಡಿಸಿರುವ ಷರತ್ತು/ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

iii. ಸದರಿ ಬೋಧಕ ಸಿಬ್ಬಂದಿಗಳು ಸಿಎಎಸ್ ಮುಂಬಡ್ತಿಗೆ ಎಲ್ಲಾ ರೀತಿಯಲ್ಲೂ ಅರ್ಹತೆಯನ್ನು ಹೊಂದಿರುವ ಬಗ್ಗೆ ಸ್ಥಾನೀಕರಣ ಆಯ್ಕೆ ಸಮಿತಿಯು ಮಾಡಿರುವ ಶಿಫಾರಸ್ಸಿನಂತೆ ಪರಿಗಣಿಸಲಾಗಿದೆ.

iv. ಸದರಿಯವರು ಸಿಎಎಸ್‌ರಡಿ ಪದೋನ್ನತಿಗೆ ಅರ್ಹತೆ ಹೊಂದಿದ ದಿನಾಂಕದಿಂದ ಸೇವಾ ಜೇಷ್ಠತೆಯನ್ನು ಪರಿಗಣಿಸುವುದು ಹಾಗೂ ಸದರಿ ಪದೋನ್ನತಿಯ ಆರ್ಥಿಕ ಸೌಲಭ್ಯವನ್ನು ಭವಿಷ್ಯವರ್ತಿಯಾಗಿ ಅಂದರೆ, ಈ ಆದೇಶವನ್ನು ಹೊರಡಿಸಿದ ದಿನಾಂಕ:16.03.2024ರಿಂದ ಅನ್ವಯವಾಗುವಂತೆ ಜಾರಿಗೊಳಿಸುವುದು.

v. ಸದರಿಯವರುಗಳಿಗೆ ವೇತನ ಶ್ರೇಣಿಯನ್ನು 7ನೇ ಎಐಸಿಟಿಇ ಪರಿಷ್ಕೃತ ವೇತನ ಶ್ರೇಣಿಯಡಿ ಸಂವಾದಿಯಾಗಿ ನಿಗಧಿಪಡಿಸಲು ಅಗತ್ಯ ಕ್ರಮವಹಿಸುವುದು.

vi. ಸದರಿ ಬೋಧಕ ಸಿಬ್ಬಂದಿಗಳ ಪ್ರಸ್ತಾವನೆಯಲ್ಲಿ ಯಾವುದೇ ತಪ್ಪು ಮಾಹಿತಿಯನ್ನು ಒದಗಿಸಿರುವುದು ಕಂಡು ಬಂದಲ್ಲಿ ಸದರಿಯವರುಗಳ ಎ.ಜಿ.ಪಿ ಮಂಜೂರಾತಿಯನ್ನು ಯಾವುದೇ ಮುನ್ಸೂಚನೆ ನೀಡದೇ ಹಿಂಪಡೆಯಲಾಗುವುದು ಹಾಗೂ ತಪ್ಪು ಮಾಹಿತಿ ಒದಗಿಸಿದವರ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಲಾಗುವುದು.

vii. ಈ ಆದೇಶದನ್ವಯ ಮಂಜೂರು ಮಾಡಲಾಗುವ ಎ.ಜಿ.ಪಿ. ಸೌಲಭ್ಯವನ್ನು ಸ್ಥಳೀಯ/ ಮಹಾಲೇಖಪಾಲರ ಲೆಕ್ಕಪರಿಶೋಧನೆಗೆ ಒಳಪಡಿಸಿದಾಗ ಯಾವುದೇ ಅಸಂಗತಗಳು ಕಂಡುಬಂದಲ್ಲಿ ಮರು ಪರಿಶೀಲಿಸುವ ಮತ್ತು ನಿಯಮಾನುಸಾರ ಸೂಕ್ತ ಕ್ರಮಕೈಗೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

viii. ಎಜಿಪಿ ಮಂಜೂರಾತಿ ವಿವರಗಳನ್ನು ಸದರಿ ಬೋಧಕ ಸಿಬ್ಬಂದಿಗಳ ಸೇವಾ ಪುಸ್ತಕದಲ್ಲಿ ನಮೂದಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:FD 51 Exp-8/2023, ದಿನಾಂಕ:03.03.2023ರಲ್ಲಿ ನೀಡಿರುವ ಅಭಿಪ್ರಾಯದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

16/3/2024

(ಮಹಾಂತಪ್ಪ ಎಸ್.ತುರಕನೂರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ
(ತಾಂತ್ರಿಕ ಶಿಕ್ಷಣ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಎ&ಇ), ಬೆಂಗಳೂರು.
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಸಂಬಂಧಪಟ್ಟ ಉಪನ್ಯಾಸಕರುಗಳಿಗೆ (ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆರವರ ಕಛೇರಿಯ ಮೂಲಕ)

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ
2. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ & ಯೋಜನೆ)
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಅನುಬಂಧ**

**(ಸರ್ಕಾರದ ಆದೇಶ ಸಂಖ್ಯೆ:ಇಡಿ 23 ಡಿಟಿಇ 2024, ದಿನಾಂಕ:16.03.2024)**

| ಕ್ರ. ಸಂ | ಹೆಸರು, ಪದನಾಮ ಮತ್ತು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆ | ಸೇವೆಗೆ ಸೇರಿದ ದಿನಾಂಕ | ವಿದ್ಯಾರ್ಹತೆ | (ಎ.ಜಿ.ಪಿ 6000) ಪದೋನ್ನತಿಗೆ ಅರ್ಹತಾ ದಿನಾಂಕ |
|---|---|---|---|---|
| **ಮೆಕ್ಯಾನಿಕಲ್ ವಿಭಾಗ** | | | | |
| 1. | ಪೂರ್ಣಿಮ ವೈ.ಹೆಚ್<br>ಉಪನ್ಯಾಸಕರು,<br>ಸರ್ಕಾರಿ ಪಾಲಿಟೆಕ್ನಿಕ್, ರಾಮನಗರ. | 06.04.2011 | ಬಿ.ಇ | 06.04.2017 |
| 2. | ಶ್ರೀನಿವಾಸ ಜಿ.ಎ,<br>ಉಪನ್ಯಾಸಕರು,<br>ಸರ್ಕಾರಿ ಪಾಲಿಟೆಕ್ನಿಕ್, ಹಿರಿಯೂರು. | 10.09.2012 | ಬಿ.ಇ | 10.09.2018 |
| 3. | ವಿಜಯ್ ಸಿ.ಜಿ<br>ಉಪನ್ಯಾಸಕರು,<br>ಸರ್ಕಾರಿ ಪಾಲಿಟೆಕ್ನಿಕ್, ರಾಮನಗರ. | 31.03.2011 | ಬಿ.ಇ | 31.03.2017 |
| 4. | ನೀತಾ ಎಮ್,<br>ಉಪನ್ಯಾಸಕರು,<br>ಸರ್ಕಾರಿ ಪಾಲಿಟೆಕ್ನಿಕ್, ಚನ್ನಪಟ್ಟಣ. | 17.09.2012 | ಬಿ.ಇ | 12.01.2019 |
| 5. | ರಮೇಶ್ ಟಿ.ಆರ್<br>ಉಪನ್ಯಾಸಕರು,<br>ಸರ್ಕಾರಿ ಪಾಲಿಟೆಕ್ನಿಕ್, ಹಿರಿಯೂರು. | 13.09.2012 | ಬಿ.ಇ | 13.09.2018 |
| 6. | ಉಮೇಶ. ಈ<br>ಉಪನ್ಯಾಸಕರು,<br>ಸರ್ಕಾರಿ ಪಾಲಿಟೆಕ್ನಿಕ್, ಹಿರಿಯೂರು. | 17.09.2012 | ಬಿ.ಇ | 17.09.2018 |
| 7. | ಮಲ್ಲನಗೌಡ ಪಾಟೀಲ್<br>ಉಪನ್ಯಾಸಕರು,<br>ಸರ್ಕಾರಿ ಪಾಲಿಟೆಕ್ನಿಕ್, ಹುಬ್ಬಳ್ಳಿ. | 28.03.2011 | ಎಂ.ಟೆಕ್ | 28.03.2017 |
| 8. | ರಮ್ಯ ಜಿ.ಸಿ<br>ಉಪನ್ಯಾಸಕರು,<br>ಸರ್ಕಾರಿ ಪಾಲಿಟೆಕ್ನಿಕ್, ರಾಮನಗರ. | 10.09.2012 | ಬಿ.ಇ | 10.09.2018 |
| 9. | ಕಿರಣ್ ಕುಮಾರ ನಲವಾಡೆ, ಉಪನ್ಯಾಸಕರು,<br>ಸರ್ಕಾರಿ ಪಾಲಿಟೆಕ್ನಿಕ್, ಹುಬ್ಬಳ್ಳಿ. | 06.04.2011 | ಎಂ.ಟೆಕ್ | 06.07.2017 |
| **ಕಂಪ್ಯೂಟರ್ ಸೈನ್ಸ್ ವಿಭಾಗ** | | | | |
| 10. | ಕಿರಣ್ ಕುಮಾರ್ ವಿ,<br>ಉಪನ್ಯಾಸಕರು,<br>ಸರ್ಕಾರಿ ಪಾಲಿಟೆಕ್ನಿಕ್, ಉಡುಪಿ. | 24.09.2012 | ಬಿ.ಇ | 24.09.2018 |
| 11. | ರಶ್ಮಿ ಟಿ. ಎನ್ .<br>ಉಪನ್ಯಾಸಕರು,<br>ಸರ್ಕಾರಿ ಪಾಲಿಟೆಕ್ನಿಕ್,<br>ಚನ್ನಪಟ್ಟಣ. | 24.09.2012 | ಬಿ.ಇ | 24.09.2018 |
| 12. | ಶ್ವೇತಾರಾಣಿ .ಕೆ<br>ಉಪನ್ಯಾಸಕರು,<br>ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು. | 03.10.2012 | ಬಿ.ಇ | 03.10.2018 |
| 13. | ನಿತ್ಯಶ್ರೀ ಬಿ<br>ಉಪನ್ಯಾಸಕರು ,<br>ಸರ್ಕಾರಿ ಪಾಲಿಟೆಕ್ನಿಕ್, ರಾಮನಗರ. | 14.03.2011 | ಬಿ.ಇ | 14.03.2017 |

| | | | | |
|---|---|---|---|---|
| ಕಮರ್ಷಿಯಲ್ ಪ್ರಾಕ್ಟೀಸ್ ವಿಭಾಗ | | | | |
| 14. | ಕೃಷ್ಣಪ್ಪ ಎಸ್.,<br>ಉಪನ್ಯಾಸಕರು,<br>ಸರ್ಕಾರಿ ಜಿ ಆರ್ ಐ ಸಿ ಸಂಸ್ಥೆ, ಬೆಂಗಳೂರು. | 19.01.2013 | ಎಂ.ಕಾಂ | 18.01.2019 |
| 15. | ಸುರೇಖಾ ಸಿ ಹಾದಿಮನಿ<br>ಉಪನ್ಯಾಸಕರು,<br>ಸರ್ಕಾರಿ ಡಿಆರ್ಆರ್ ಪಾಲಿಟೆಕ್ನಿಕ್,<br>ದಾವಣಗೆರೆ. | 30.12.1997 | ಎಂ.ಕಾಂ | 01.11.2018 |
| 16. | ಸಂಜೀವ್ ದೇಶಮುಖ್<br>ಉಪನ್ಯಾಸಕರು,<br>ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹುಬ್ಬಳ್ಳಿ. | 18.01.2010 | ಎಂ.ಕಾಂ | 18.01.2019 |
| 17. | ಪ್ರಶಾಂತ್ ಹುಬ್ಬರಟ್ಟಿ.,<br>ಉಪನ್ಯಾಸಕರು,<br>ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಹುಬ್ಬಳ್ಳಿ. | 23.01.2010 | ಎಂ.ಕಾಂ | 23.01.2019 |
| ಇ&ಸಿ ವಿಭಾಗ | | | | |
| 18. | ದಿವ್ಯ ಟಿ,<br>ಉಪನ್ಯಾಸಕರು<br>ಸರ್ಕಾರಿ ಪಾಲಿಟೆಕ್ನಿಕ್, ಚನ್ನಪಟ್ಟಣ | 01.10.2012 | ಬಿ.ಇ | 25.11.2018 |
| 19. | ರಾಧಿಕಾ ಆರ್,<br>ಉಪನ್ಯಾಸಕರು,<br>ಸರ್ಕಾರಿ ಪಾಲಿಟೆಕ್ನಿಕ್, ಚನ್ನಪಟ್ಟಣ. | 24.09.2012 | ಬಿ.ಇ | 24.09.2018 |
| 20. | ರೇಣುಕಾ ಎನ್<br>ಉಪನ್ಯಾಸಕರು,<br>ಸರ್ಕಾರಿ ಪಾಲಿಟೆಕ್ನಿಕ್, ಕೆ.ಜಿ.ಎಫ್. | 01.04.2011 | ಬಿ.ಇ | 01.04.2017 |
| ವಿಜ್ಞಾನ ಮತ್ತು ಮಾನವ ಶಾಸ್ತ್ರ ವಿಭಾಗ | | | | |
| 21. | ವೆಂಕಟಲಕ್ಷ್ಮಮ್ಮ ಕೆ.ಆರ್ .<br>ಉಪನ್ಯಾಸಕರು,<br>ಸರ್ಕಾರಿ ಪಾಲಿಟೆಕ್ನಿಕ್, ಚನ್ನಪಟ್ಟಣ. | 10.09.2012 | ಎಂ.ಎಸ್ಸಿ | 10.09.2018 |
| ಲೈಬ್ರರಿ ಸೈನ್ಸ್ ವಿಭಾಗ | | | | |
| 22. | ನಂದಾದೇವಿ.ಕೆ.ಜಿ.,<br>ಉಪನ್ಯಾಸಕರು,<br>ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು. | 18.01.2013 | ಎಂ.ಲಿಬ್ | 18.01.2019 |

16/3/2024

(ಮಹಾಂತಪ್ಪ ಎಸ್.ತುರಕನೂರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ
(ತಾಂತ್ರಿಕ ಶಿಕ್ಷಣ)